# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1867 (2181)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿರುವ ಖಾಲಿ ಹುದ್ದೆಗಳ ಮಾಹಿತಿ

(ಅ) ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ಇಲಾಖಾವಾರು ವಿವರ ನೀಡುವುದು)

(ಆ) ಸಂವಿಧಾನದ 371ಜೆ ಮೀಸಲಾತಿ ಅನ್ವಯ ಇಲ್ಲಿಯವರೆಗೆ ಭರ್ತಿ ಮಾಡಲಾದ ಹುದ್ದೆಗಳ ಸಂಖ್ಯೆ ಎಷ್ಟು ; (ಇಲಾಖಾವಾರು, ವರ್ಷವಾರು ವಿವರ ನೀಡುವುದು)

(ಇ) ಸಂವಿಧಾನದ 371ಜೆ ಮೀಸಲಾತಿ ಅನ್ವಯ ಇಲ್ಲಿಯವರೆಗೆ ಪ್ರವೇಶ ಪಡೆದಿರುವ ಮೆಡಿಕಲ್ ಮತ್ತು ಇಂಜಿನೀಯರಿಂಗ್ ಸೀಟುಗಳ ಸಂಖ್ಯೆ ಎಷ್ಟು; (ಕಾಲೇಜುವಾರು, ವರ್ಷವಾರು ವಿವರ ನೀಡುವುದು)

(ಈ) ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮವೇನು; ಖಾಲಿ ಹುದ್ದೆಗಳಿರುವ ಕಾರಣ ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗೆ ಹಿನ್ನಡೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು?